ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**23.02.2026** **07.35 a.m.**

**<><><><>**

ಮುಖ್ಯಾಂಶಗಳು

1. ಶಾಂತಿ ಹಾಗೂ ಪ್ರಗತಿಯ ಹಂಚಿಕೆಯ ಬದ್ಧತೆ ಮೇರೆಗೆ ಭಾರತ-ಇಸ್ರೇಲ್ ನಡುವೆ ಬಾಂಧವ್ಯ ವೃದ್ಧಿ- ಪ್ರಧಾನಿ ನರೇಂದ್ರ ಮೋದಿ
2. ಆಫ್ಘನ್ ಭೂ ಪ್ರದೇಶದ ಮೇಲೆ ಪಾಕಿಸ್ತಾನ ವೈಮಾನಿಕ ದಾಳಿ; ಭಾರತ ಖಂಡನೆ
3. ಅಂಗಾಗ ದಾನ ಮತ್ತು ಕಸಿ ಕ್ಷೇತ್ರದಲ್ಲಿ ಭಾರತ ಮಹತ್ವದ ಮೈಲಿಗಲ್ಲು; ೨೦೨೫ರ ವೇಳೆಗೆ ಅಂಗಾಂಗ ಕಸಿಗಳ ಸಂಖ್ಯೆ ೨೦ ಸಾವಿರಕ್ಕೆ ಏರಿಕೆ: ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ
4. ರಾಷ್ಟ್ರಪತಿ ಭವನದಲ್ಲಿ ಇಂದು ರಾಜಾಜಿ ಉತ್ಸವ; ನಾಳೆಯಿಂದ ಮಾರ್ಚ್ ೧ರವರೆಗೆ ಸಿ. ರಾಜಗೋಪಾಲಾಚಾರಿ ಕುರಿತು ವಸ್ತು ಪ್ರದರ್ಶನ
5. ಟಿ-೨೦ ವಿಶ್ವಕಪ್ ಕ್ರಿಕೆಟ್: ಸೂಪರ್ ೮ ಹಂತದಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಮಣಿದ ಭಾರತ

<><><><>

ನಂಬಿಕೆ, ನಾವೀನ್ಯತೆ ಮತ್ತು ಶಾಂತಿ ಹಾಗೂ ಪ್ರಗತಿಯ ಹಂಚಿಕೆಯ ಬದ್ಧತೆಯ ಮೇಲೆ ನಿರ್ಮಿಸಲಾದ ಇಸ್ರೇಲ್ ನೊಂದಿಗಿನ ತನ್ನ ನಿರಂತರ ಸ್ನೇಹವನ್ನು ಭಾರತ ಆಳವಾಗಿ ಗೌರವಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಸಾಮಾಜಿಕ ಮಾಧ್ಯಮ ಪೋಸ್ಟ್ ಗೆ ಪ್ರತಿಕ್ರಿಯೆಯಾಗಿ ಪ್ರಧಾನಿ, ಭಾರತ ಮತ್ತು ಇಸ್ರೇಲ್ ನಡುವಿನ ಬಲವಾದ ಬಾಂಧವ್ಯ ಮತ್ತುಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳ ವೈವಿಧ್ಯಮಯ ಸ್ವರೂಪದ ಬಗ್ಗೆ ನಾನು ಒಪ್ಪುತ್ತೇನೆ ಎಂದು ಹೇಳಿದ್ದಾರೆ. ತಮ್ಮ ಮುಂಬರುವ ಇಸ್ರೇಲ್ ಭೇಟಿಯ ವೇಳೆ ಎರಡೂ ಕಡೆಯ ನಡುವೆ ಮಾತುಕತೆಯನ್ನು ಎದಿರು ನೋಡುತ್ತಿದ್ದೇನೆ ಎಂದು ಅವರು ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ, ಇಸ್ರೇಲ್ ಪ್ರಧಾನಿ, ಇಸ್ರೇಲ್ ಮತ್ತು ಭಾರತದ ನಡುವಿನ ಬಾಂಧವ್ಯವು ಇಬ್ಬರು ಜಾಗತಿಕ ನಾಯಕರ ನಡುವಿನ ಪ್ರಬಲ ಮೈತ್ರಿಯಾಗಿದೆ ಎಂದು ಹೇಳಿದ್ದಾರೆ. ಎರಡೂ ದೇಶಗಳು ನಾವೀನ್ಯತೆ, ಭದ್ರತೆ ಮತ್ತು ಹಂಚಿಕೆಯ ಕಾರ್ಯತಂತ್ರದ ದೃಷ್ಟಿಕೋನದಲ್ಲಿ ಪಾಲುದಾರರು ಎಂದು ಅವರು ಹೇಳಿದರು.

ಹಾಗೆಯೇ ಕೃತಕ ಬುದ್ಧಿಮತ್ತೆಯಿಂದ ಪ್ರಾದೇಶಿಕ ಸಹಕಾರದವರೆಗೆ, ಉಭಯ ರಾಷ್ಟ್ರಗಳ ನಡುವಿನ ಪಾಲುದಾರಿಕೆಯು ಹೊಸ ಎತ್ತರವನ್ನು ತಲುಪುತ್ತಿದೆ ಎಂದು ಅವರು ತಿಳಿಸಿದ್ದಾರೆ.

<><><><>

ಪವಿತ್ರ ರಂಜಾನ್ ತಿಂಗಳಲ್ಲಿ ಅಫ್ಘಾನ್ ಭೂಪ್ರದೇಶದ ಮೇಲೆ ಪಾಕಿಸ್ತಾನದ ವೈಮಾನಿಕ ದಾಳಿಯನ್ನು ಭಾರತ ಬಲವಾಗಿ ಖಂಡಿಸಿದೆ. ಈ ಸಂಬಂಧ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಇದು ಪಾಕಿಸ್ತಾನದ ಆಂತರಿಕ ವೈಫಲ್ಯಗಳನ್ನು ಬಾಹ್ಯೀಕರಿಸುವ ಮತ್ತೊಂದು ಪ್ರಯತ್ನವಾಗಿದೆ ಎಂದು ಹೇಳಿದ್ದಾರೆ. ಆಫ್ಘಾನಿಸ್ತಾನದ ಸಾರ್ವಭೌಮತ್ವ, ಪ್ರಾದೇಶಿಕ ಸಮಗ್ರತೆ ಮತ್ತು ಸ್ವಾತಂತ್ರ್ಯಕ್ಕೆ ಭಾರತದ ಬೆಂಬಲವನ್ನು ಅವರು ಪುನರುಚ್ಚರಿಸಿದ್ದಾರೆ.

<><><><>

ಅಂಗಾಂಗ ದಾನ ಮತ್ತು ಕಸಿ ಕ್ಷೇತ್ರದಲ್ಲಿ ಭಾರತವು ಮಹತ್ವದ ಮೈಲಿಗಲ್ಲನ್ನು ಸಾಧಿಸಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಹೇಳಿದೆ. ರಾಷ್ಟ್ರೀಯ ಅಂಗಾಂಗ ಮತ್ತು ಅಂಗಾಂಶ ಕಸಿ ಸಂಸ್ಥೆ, ದೇಶಾದ್ಯಂತ ಅಂಗಾಂಗ ದಾನ, ಹಂಚಿಕೆ ಮತ್ತು ಕಸಿಯಲ್ಲಿ ಅಭೂತಪೂರ್ವ ಪ್ರಗತಿಯನ್ನು ದಾಖಲಿಸಿದೆ. ದೇಶದಲ್ಲಿ ಕಸಿಗಳ ಸಂಖ್ಯೆ ೨೦೧೩ ರಲ್ಲಿ ೫ ಸಾವಿರ ಕ್ಕಿಂತ ಕಡಿಮೆ ಇದ್ದದ್ದು ೨೦೨೫ ರಲ್ಲಿ ಸುಮಾರು ೨೦ ಸಾವಿರಕ್ಕೆ ಏರಿದೆ. ಇದು ಗಮನಾರ್ಹ ನಾಲ್ಕು ಪಟ್ಟು ಹೆಚ್ಚಳವನ್ನು ಸೂಚಿಸುತ್ತದೆ. ಮೃತ ದಾನಿಗಳು ದಾನ ಮಾಡಿದ ಅಂಗಗಳನ್ನು ಬಳಸಿಕೊಂಡು ಪ್ರಸ್ತುತ ಶೇಕಡಾ ೧೮ರಷ್ಟು ಕಸಿ ಮಾಡಲಾಗುತ್ತಿದೆ ಎಂದು ಸಚಿವಾಲಯ ತಿಳಿಸಿದೆ. ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ತಮ್ಮ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಅಂಗಾಂಗ ದಾನದ ಮಹತ್ವವನ್ನು ಬಿಂಬಿಸಿದರು ಮತ್ತು ದೇಶದಲ್ಲಿ ಅಂಗಾಂಗ ದಾನ ಆಂದೋಲನಕ್ಕೆ ಮತ್ತಷ್ಟು ಉತ್ತೇಜನ ನೀಡಿದರು. ೨೦೨೫ ರಲ್ಲಿ ಸಾವಿನ ನಂತರ ೧ ಸಾವಿರದ ೨೦೦ಕ್ಕೂ ಹೆಚ್ಚು ಕುಟುಂಬಗಳು ತಮ್ಮ ಪ್ರೀತಿಪಾತ್ರರ ಅಂಗಾಂಗಗಳನ್ನು ದಾನ ಮಾಡಲು ಮುಂದೆ ಬಂದಿವೆ ಮತ್ತು ಪ್ರತಿಯೊಬ್ಬ ದಾನಿಯು ಈಗ ಬಹು-ಅಂಗಾಂಗ ದಾನಿಯಾಗಿದ್ದು, ಅನೇಕ ಜೀವನವನ್ನು ಪರಿವರ್ತಿಸಿದೆ ಎಂದು ಸಚಿವಾಲಯ ಹೇಳಿದೆ. ೨೦೨೩ ರ ಸೆಪ್ಟೆಂಬರ್ ೧೭ ರಿಂದ ಆಧಾರ್ ಆಧಾರಿತ ಪರಿಶೀಲನಾ ವ್ಯವಸ್ಥೆಯ ಮೂಲಕ ಸಾವಿನ ನಂತರ ಅಂಗಾಂಗಗಳು ಮತ್ತು

ಅಂಗಾಂಶಗಳನ್ನು ದಾನ ಮಾಡಲು ೪.೮ ಲಕ್ಷಕ್ಕೂ ಹೆಚ್ಚು ನಾಗರಿಕರು ನೋಂದಾಯಿಸಿಕೊಂಡಿದ್ದಾರೆ.

<><><><>

ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ಇಂದು ರಾಜಾಜಿ ಉತ್ಸವವನ್ನು ಆಚರಿಸಲಾಗುತ್ತಿದೆ. ರಾಷ್ಟ್ರಪತಿ ಭವನದ ಸೆಂಟ್ರಲ್ ಪ್ರಾಂಗಣದಲ್ಲಿರುವ ಬ್ರಿಟಿಷ್ ವಾಸ್ತುಶಿಲ್ಪಿ ಎಡ್ವಿನ್ ಲುಟಿಯೆನ್ಸ್ ಅವರ ಪ್ರತಿಮೆಯ ಬದಲಿಗೆ ಸ್ವತಂತ್ರ ಭಾರತದ ಮೊದಲ ಭಾರತೀಯ ಗವರ್ನರ್ ಜನರಲ್ ಸಿ.ರಾಜಗೋಪಾಲಾಚಾರಿ ಅವರ ಪ್ರತಿಮೆಯನ್ನು ಸ್ಥಾಪಿಸಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ತಮ್ಮ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ತಿಳಿಸಿದ್ದಾರೆ. ಸಿ. ರಾಜಗೋಪಾಲಾಚಾರಿ ಅವರು ಅಧಿಕಾರವನ್ನು ಒಂದು ಸ್ಥಾನವಾಗಿ ನೋಡದೆ ಸೇವೆಯ ಒಂದು ರೂಪವಾಗಿ ನೋಡಿದ ನಾಯಕರಲ್ಲಿ ಒಬ್ಬರು ಎಂದು ಪ್ರಧಾನಿ ಶ್ಲಾಘಿಸಿದ್ದಾರೆ. ಸ್ವಾತಂತ್ರ್ಯದ ನಂತರವೂ ಬ್ರಿಟಿಷ್ ಆಡಳಿತಗಾರರ ಪ್ರತಿಮೆಗಳನ್ನು ರಾಷ್ಟ್ರಪತಿ ಭವನದಲ್ಲಿ ಉಳಿಯಲು ಅವಕಾಶ ನೀಡಲಾಗಿದ್ದು, ಭಾರತದ ಶ್ರೇಷ್ಠ ಪುತ್ರರ ಪ್ರತಿಮೆಗಳಿಗೆ ಸ್ಥಳಾವಕಾಶ ನಿರಾಕರಿಸಲಾಗಿದೆ ಎಂಬುದು ದುರದೃಷ್ಟಕರ ಎಂದು ಅವರು ಹೇಳಿದರು. ರಾಜಾಜಿ ಉತ್ಸವದ ಅಂಗವಾಗಿ ಫೆಬ್ರವರಿ ೨೪ ರಿಂದ ಮಾರ್ಚ್ ೧ ರವರೆಗೆ ಸಿ. ರಾಜಗೋಪಾಲಾಚಾರಿ ಅವರ ಕುರಿತ ವಸ್ತು ಪ್ರದರ್ಶನವೂ ನಡೆಯಲಿದೆ.

<><><><>

ಕಳೆದ ತಿಂಗಳು ಉಪ ಮುಖ್ಯಮಂತ್ರಿ ಅಜಿತ್ ಪವಾರ್ ಅವರ ಸಾವಿನ ವಿಮಾನ ಅಪಘಾತದ ಕುರಿತು ಸಿಬಿಐ ತನಿಖೆಗೆ ಆದೇಶಿಸುವಂತೆ ಮಹಾರಾಷ್ಟ್ರ ಸರ್ಕಾರವು ಕೇಂದ್ರ ಗೃಹ ಸಚಿವ ಅಮಿತ್ ಶಾಗೆ ಮನವಿ ಮಾಡಿದೆ. ಈ ವಿಷಯವನ್ನು ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ನಿನ್ನೆ ಮುಂಬೈನಲ್ಲಿ ತಿಳಿಸಿದ್ದಾರೆ. ಈ ಸಂಬಂಧ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಫಡ್ನವೀಸ್, ವಿಮಾನ ಅಪಘಾತದ ಬಗ್ಗೆ ಎಲ್ಲಾ ಅನುಮಾನಗಳನ್ನು ನಿವಾರಿಸಲು ಮಹಾಯುತಿ ಸರ್ಕಾರ ಖಚಿತಪಡಿಸುತ್ತದೆ. ವಿಮಾನ ಅಪಘಾತದ ಬಗ್ಗೆ ಸಿಬಿಐ ತನಿಖೆ ನಡೆಸುವಂತೆ ಕೋರಿ ಬಿಜೆಪಿಯ ಮಿತ್ರ ಪಕ್ಷವಾದ ಎನ್ ಸಿಪಿಯಿಂದ ಪತ್ರ ಬಂದಿದೆ ಮತ್ತು ಗೃಹ ಸಚಿವ ಅಮಿತ್ ಶಾ ಅವರೊಂದಿಗೆ ಮಾತನಾಡಿದ್ದಾರೆ ಎಂದು ಮುಖ್ಯಮಂತ್ರಿ ಹೇಳಿದರು. ಡಿಜಿಸಿಎ ಮತ್ತು ರಾಜ್ಯ ಸಿಐಡಿ ತನಿಖೆಯ ಜತೆಗೆ ಸಿಬಿಐ ತನಿಖೆಗೆ ಒತ್ತಾಯಿಸಲಾಗಿದೆ ಎಂದು ಅವರು ಹೇಳಿದರು.

ಜನವರಿ ೨೮ರಂದು ಪುಣೆ ಜಿಲ್ಲೆಯ ಬಾರಾಮತಿ ಬಳಿ ಇಳಿಯಲು ಯತ್ನಿಸುತ್ತಿದ್ದ ಚಾರ್ಟರ್ಡ್ ವಿಮಾನ ಅಪಘಾತಕ್ಕೀಡಾಗಿ ಅಜಿತ್ ಪವಾರ್ ಮತ್ತು ಇತರ ನಾಲ್ವರು ಸಾವನ್ನಪ್ಪಿದ್ದರು. ಡಿಜಿಸಿಎ ವಿಎಸ್‌ಆರ್ ಕಂಪನಿಯ ಲೆಕ್ಕಪರಿಶೋಧನೆ ನಡೆಸುತ್ತಿದೆ ಮತ್ತು ಅದರ ಎಲ್ಲಾ ಲಾಗ್ ಬುಕ್ ಗಳನ್ನು ಪರಿಶೀಲಿಸಲಾಗುತ್ತಿದೆ ಎಂದು ಫಡ್ನವೀಸ್ ಹೇಳಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದ ಉಪಮುಖ್ಯಮಂತ್ರಿ ಸುನೇತ್ರಾ ಪವಾರ್ ಅವರು, ವಿಮಾನ ಅಪಘಾತದ ಬಗ್ಗೆ ಸಿಬಿಐ ತನಿಖೆಯನ್ನು ಕೋರಿದ್ದೇವೆ ಮತ್ತು ಸಮಗ್ರ ತನಿಖೆಯ ಭರವಸೆ ನೀಡಿದ್ದಾರೆ ಎಂದು ಹೇಳಿದರು.

<><><>

ರಷ್ಯಾದಲ್ಲಿ, ಉಕ್ರೇನ್ ನಡೆಸಿದ ಕ್ಷಿಪಣಿ ದಾಳಿಯು ಇಂಧನ ಮೂಲಸೌಕರ್ಯಕ್ಕೆ ತೀವ್ರ ಹಾನಿಯನ್ನುಂಟುಮಾಡಿದೆ. ಇದರಿಂದ ಉಕ್ರೇನ್ ಗಡಿಯ ಸಮೀಪವಿರುವ ರಷ್ಯಾದ ಬೆಲ್ಗೊರೊಡ್ ಪ್ರದೇಶದಲ್ಲಿ ವಿದ್ಯುತ್, ಶಾಖ ಮತ್ತು ನೀರಿನ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿದೆ. ಈ ಬಗ್ಗೆ ಮಾಹಿತಿ ನೀಡಿದ ಪ್ರಾದೇಶಿಕ ಗವರ್ನರ್ ವ್ಯಾಚೆಸ್ಲಾವ್ ಗ್ಲಾಡ್ಕೊವ್, ಇಂಧನ ಮೂಲಸೌಕರ್ಯಕ್ಕೆ ಗಂಭೀರ ಹಾನಿಯಾಗಿದೆ ಎಂದು ತಿಳಿಸಿದ್ದಾರೆ. ವಸತಿ ಪ್ರದೇಶಗಳಲ್ಲಿ ವಿದ್ಯುತ್, ನೀರು ಮತ್ತು ಶಾಖದ ಪೂರೈಕೆಯಲ್ಲಿ ಅಡೆತಡೆಗಳು ಉಂಟಾಗಿವೆ ಎಂದು ಅವರು ಹೇಳಿದರು. ಗಡಿಯಿಂದ ೪೦ ಕಿಲೋಮೀಟರ್ ದೂರದಲ್ಲಿರುವ ಬೆಲ್ಗೊರೊಡ್ ನಗರ ಮತ್ತು ಅದರ ಸುತ್ತಮುತ್ತಲಿನ ಪ್ರದೇಶಗಳ ಮೇಲೆ ನಡೆದ ಈ ದಾಳಿಯನ್ನು ಗ್ಲಾಡ್ಕೊವ್ 'ಬೃಹತ್ ದಾಳಿ' ಎಂದು ಬಣ್ಣಿಸಿದ್ದಾರೆ. ಈ ವಾರ ನಾಲ್ಕನೇ ವರ್ಷಕ್ಕೆ ಕಾಲಿಡಲಿರುವ ಈ ಯುದ್ಧದಲ್ಲಿ, ಬೆಲ್ಗೊರೊಡ್ ಪ್ರದೇಶವು ಪದೇ ಪದೇ ಉಕ್ರೇನ್ ಪಡೆಗಳ ದಾಳಿಗೆ ತುತ್ತಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

<><><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಸೂಪರ್ ೮ರ ಹಂತದ ಗುಂಪು ೧ರ ಪಂದ್ಯದಲ್ಲಿ ಭಾರತ ತಂಡ ೭೬ ರನ್‌ಗಳಿಂದ ದಕ್ಷಿಣ ಆಫ್ರಿಕಾ ವಿರುದ್ಧ ಸೋಲು ಅನುಭವಿಸಿತು. ಮೊದಲು ಬ್ಯಾಟಿಂಗ್ ಮಾಡಿದ ದಕ್ಷಿಣ ಆಫ್ರಿಕಾ ನಿಗದಿತ ೨೦ ಓವರ್‌ಗಳಲ್ಲಿ ಏಳು ವಿಕೆಟ್‌ಗಳಿಗೆ ೧೮೭ ರನ್ ಗಳಿಸಿತು. ಡೇವಿಡ್ ಮಿಲ್ಲರ್ ೩೫ ಎಸೆತಗಳಲ್ಲಿ ೬೩ ರನ್ ಗಳಿಸಿದರು. ೧೮೮ ರನ್‌ಗಳ ಗುರಿ ಬೆನ್ನಟ್ಟಿದ ಭಾರತ ತಂಡ ೧೮.೫ ಓವರ್‌ಗಳಲ್ಲಿ ೧೧೧ ರನ್‌ಗಳಿಗೆ ಆಲೌಟ್ ಆಯಿತು. ದಕ್ಷಿಣ ಆಫ್ರಿಕಾ ತಂಡದ ಪರ

ಮಾರ್ಕೊ ಜಾನ್ಸೆನ್ ನಾಲ್ಕು ವಿಕೆಟ್‌ಗಳನ್ನು ಪಡೆದರೆ, ಕೇಶವ್ ಮಹಾರಾಜ್ ಮೂರು ವಿಕೆಟ್‌ಗಳನ್ನು ಪಡೆದರು. ಡೇವಿಡ್ ಮಿಲ್ಲರ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ನಿನ್ನೆ ಮಧ್ಯಾಹ್ನ ಪಲ್ಲೆಕೆಲೆ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆದ ಸೂಪರ್ ೮ ಹಂತದ ಗುಂಪು ೨ರ ಪಂದ್ಯದಲ್ಲಿ ಇಂಗ್ಲೆಂಡ್ ತಂಡವು ಶ್ರೀಲಂಕಾ ವಿರುದ್ಧ ೫೧ ರನ್‌ಗಳ ಭರ್ಜರಿ ಜಯ ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್ ತಂಡವು ೨೦ ಓವರ್‌ಗಳಲ್ಲಿ ೬ ವಿಕೆಟ್‌ಗಳಿಗೆ ೧೪೬ ರನ್ ಗಳಿಸಿತು. ನಂತರ ಶ್ರೀಲಂಕಾ ತಂಡವು ೧೬.೪ ಓವರ್‌ಗಳಲ್ಲಿ ೯೫ ರನ್‌ಗಳಿಗೆ ಆಲೌಟ್ ಆಯಿತು. ಇಂದು ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆಯಲಿರುವ ಸೂಪರ್ ೮ರ ಹಂತದ ಗುಂಪು ೧ರ ಪಂದ್ಯದಲ್ಲಿ ಜಿಂಬಾಬ್ವೆ ತಂಡವು ವೆಸ್ಟ್ ಇಂಡೀಸ್ ತಂಡವನ್ನು ಎದುರಿಸಲಿದೆ. ಪಂದ್ಯವು ಸಂಜೆ ೭ ಗಂಟೆಗೆ ಆರಂಭವಾಗಲಿದೆ.

<><><><>

ಆಕ್ಷನ್ ಥ್ರಿಲ್ಲರ್ "ಒನ್ ಬ್ಯಾಟಲ್ ಆಫ್ಟರ್ ಅದರ್" ೭೯ ನೇ ಬ್ರಿಟಿಷ್ ಅಕಾಡೆಮಿ ಫಿಲ್ಮ್ ಅವಾರ್ಡ್ಸ್‌ನಲ್ಲಿ ಪ್ರಾಬಲ್ಯ ಸಾಧಿಸಿದೆ. ಬಾಫ್ಟಾ ಎಂದು ಜನಪ್ರಿಯವಾಗಿ ಕರೆಯಲಾಗುವ ಚಿತ್ರೋತ್ಸವದಲ್ಲಿ ಅತ್ಯುತ್ತಮ ಚಲನಚಿತ್ರ ಸೇರಿದಂತೆ ಆರು ಪ್ರಶಸ್ತಿಗಳನ್ನು ಗೆದ್ದುಕೊಂಡಿದೆ. ಪಾಲ್ ಥಾಮಸ್ ಆಂಡರ್ಸನ್, 'ಒನ್ ಬ್ಯಾಟಲ್ ಆಫ್ಟರ್ ಅದರ್" ಗಾಗಿ ಅತ್ಯುತ್ತಮ ನಿರ್ದೇಶಕ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಇದಲ್ಲದೆ, ಅವರು ಅತ್ಯುತ್ತಮ ರೂಪಾಂತರಿತ ಚಿತ್ರಕಥೆ ಮತ್ತು ಅತ್ಯುತ್ತಮ ಛಾಯಾಗ್ರಹಣಕ್ಕಾಗಿ ಪ್ರಶಸ್ತಿಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಜೆಸ್ಸಿ ಬಕ್ಲೆ "ಹ್ಯಾಮ್ನೆಟ್" ಚಿತ್ರಕ್ಕಾಗಿ ಅತ್ಯುತ್ತಮ ನಟಿ ಎಂದು ಹೆಸರಿಸಲ್ಪಟ್ಟರೆ, ರಾಬರ್ಟ್ ಅರಾಮಯೊ ಬ್ರಿಟಿಷ್ ಇಂಡಿ ಚಿತ್ರ "ಐ ಸ್ವೇರ್" ಗಾಗಿ ಅತ್ಯುತ್ತಮ ನಟ ಪ್ರಶಸ್ತಿಗೆ ಪಾತ್ರರಾಗಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>